ಶ್ರೀ ಕಾಗೋಡು ತಿಮ್ಮಪ್ಪ :— ಅಷ್ಟೊತ್ತಿಗೆ ಚುನಾವಣೆಯ ನೋಟಿಫಿಕೇಷನ್ ಪ್ರಕಟವಾಗಿರುತ್ತದೆ. ಯಾವುದೇ ಕಾರ್ಯಕ್ರಮವನ್ನು ಮಾಡುವುದಕ್ಕೆ ಆಗುವುದಿಲ್ಲ.

ಶ್ರೀ ಜೆ.ಹೆಚ್. ಪಟೇಲ್ :— ಚಾಮರಾಜನಗರಕ್ಕೆ ಹೋದ ಮುಖ್ಯಮಂತ್ರಿಗಳು ಸ್ಥಾನವನ್ನು ಕಳೆದುಕೊಳ್ಳುತ್ತಾರೆ ಎಂದು ಹೇಳುತ್ತಿದ್ದಾರೆ. ಆ ಸ್ಥಳವು ಅಷ್ಟೊಂದು ಪವಿತ್ರ ಸ್ಥಳವಾಗಿದ್ದರೆ ನಾನು ಅಲ್ಲಿಗೆ ಹೋಗಿಯೇ ಹೋಗುತ್ತೇನೆ.

ಶ್ರೀ ಎಂ.ಎಸ್. ಪಾಟೀಲ್ (ನಗರಾಭಿವೃದ್ಧಿ ಸಚಿವರು) :— ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರೇ ಸೆಪ್ಟೆಂಬರ್ ತಿಂಗಳಿನಲ್ಲಿ ಈ ಕೆಲಸ ಆಗುತ್ತದೆಂದು ಉತ್ತರದಲ್ಲಿ ತಿಳಿಸಿದ್ದಾರೆಂದು ಹೇಳಿದ್ದಾರೆ. ಅವರ ಹೇಳಿಕೆಯನ್ನೇ ಪುಷ್ಟೀಕರಿಸಿ ಸೆಪ್ಟೆಂಬರ್ ತಿಂಗಳಿನಲ್ಲಿ ಈ ಯೋಜನೆಯನ್ನು ಕಂಪ್ಲೆಂಟ್ ಮಾಡುವುದಾಗಿ ಹೇಳಬಯಸುತ್ತೇನೆ.

ಮಾಗಡಿ ಕ್ಷೇತ್ರದಲ್ಲಿ ಮುರಾರ್ಜಿದೇಸಾಯಿ ವಸತಿಶಾಲೆ ಪ್ರಾರಂಭ.

42(267) ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ಕ್ಷೇತ್ರದಲ್ಲಿ ಮುರಾರ್ಜಿದೇಸಾಯಿ ವಸತಿಶಾಲೆ ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಈ ವಸತಿಶಾಲೆಗೆ ಎಂದಿನಿಂದ ಮಂಜೂರಾತಿ ಕೊಡಲಾಗುವುದು?

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಶ್ರೀ ಹೆಚ್.ಸಿ. ಬಾಲಕೃಷ್ಣ :— ಮಾನ್ಯ ಅಧ್ಯಕ್ಷರೆ, ನನ್ನ ಕ್ಷೇತ್ರವಾದ ಮಾಗಡಿಯಲ್ಲಿ ಮುರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾರಂಭಿಸುವ ಪ್ರಸ್ತಾಪ ಸರ್ಕಾರಕ್ಕೆ ಇದೆಯೇ ಎಂದು ಕೇಳಿದ್ದಕ್ಕೆ ಆ ರೀತಿ ಯಾವುದೂ ಇಲ್ಲ ಎಂದು ಉತ್ತರ ಕೊಟ್ಟಿದ್ದಾರೆ. ನಿಮ್ಮ ಸರ್ಕಾರ ಅಧಿಕಾರಕ್ಕೆ ಬಂದಮೇಲೆ ಎಲ್ಲೆಲ್ಲಿ ಮುರಾರ್ಜಿ ದೇಸಾಯಿ ಶಾಲೆಗಳನ್ನು ಮಾಡಿದ್ದೀರಿ? ಈ ವರ್ಷ ಎಲ್ಲೆಲ್ಲಿ ಪ್ರಾರಂಭ ಮಾಡಬೇಕೆಂದಿದ್ದೀರಿ? ಮುರಾರ್ಜಿ ದೇಸಾಯಿ ಶಾಲೆಗಳನ್ನು ಪ್ರಾರಂಭ ಮಾಡುವುದರಲ್ಲಿ ತಾವು ಅನುಸರಿಸುತ್ತಿರುವ ಮಾರ್ಗಸೂಚಿ ಏನು? ಈ ಉದ್ದೇಶಕ್ಕಾಗಿ ನನ್ನ ಕ್ಷೇತ್ರದಲ್ಲಿ ಈಗಾಗಲೇ ಹತ್ತು ಎಕರೆ ಜಾಗವನ್ನು

ನಿಗದಿಮಾಡಿಟ್ಟುಕೊಂಡಿದ್ದೀರಿ, ಆ ಜಾಗ ಬೇಡವೆ? ಬೇಡದಿದ್ದರೆ ಈ ಜಾಗವನ್ನು ವಾಪಸ್ ಕೊಟ್ಟರೆ ಇತರೆ ಕೆಲಸಗಳಿಗೆ ಅನುಕೂಲವಾಗುತ್ತದೆಯೆಂದು ಕೇಳಿಕೊಳ್ಳುತ್ತೇನೆ.

ಶ್ರೀ ಕೆ.ಎಸ್. ಕೃಷ್ಣಾರೆಡ್ಡಿ :— ಮಾನ್ಯ ಅಧ್ಯಕ್ಷರೆ, ಪ್ರತಿಯೊಂದು ಶಾಸನಸಭಾ ಕ್ಷೇತ್ರಕ್ಕೆ ಮುರಾರ್ಜಿ ದೇಸಾಯಿ ಶಾಲೆಯನ್ನು ಕೊಡಲು ಸಾಧ್ಯವಾಗುವುದಿಲ್ಲ. ಪ್ರತಿ ಜಿಲ್ಲೆಗೆ ಎರಡರಂತೆ ಸುಮಾರು ನಲವತ್ತು ಇಂಥ ಶಾಲೆಗಳನ್ನು ನಾವು ಪ್ರಾರಂಭ ಮಾಡಿದ್ದೇವೆ. ಆ ಶಾಲೆ ಕೇವಲ ಕ್ಷೇತ್ರಕ್ಕೆ ಸೀಮಿತವಾಗಿರುವುದಿಲ್ಲ. ಜಿಲ್ಲಾಮಟ್ಟದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳ ಆಯ್ಕೆ ಪರೀಕ್ಷೆ ನಡೆಯುತ್ತದೆ, ಅದರಲ್ಲಿ ಜಿಲ್ಲೆಯ ಎಲ್ಲಾ ಕ್ಷೇತ್ರದವರೂ ಪಾಲುಗೊಳ್ಳುತ್ತಾರೆ. ಆದ್ದರಿಂದ ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೂ ಇಂಥ ಶಾಲೆಗಳನ್ನು ಕಟ್ಟಲು ಸರ್ಕಾರದಿಂದ ಸಾಧ್ಯವಾಗುವುದಿಲ್ಲ. ನಾವೇನು ಮಾಗಡಿ ಕ್ಷೇತ್ರದಲ್ಲಿ ಹತ್ತು ಎಕರೆ ಜಾಗವನ್ನು ಇದಕ್ಕಾಗಿ ನಿಗದಿ ಮಾಡಿಟ್ಟುಕೊಂಡಿದ್ದೇವೆ ಅದನ್ನು ಮಾನ್ಯ ಸದಸ್ಯರು ಹೇಳಿದ ಹಾಗೆ ಜಿಲ್ಲಾಧಿಕಾರಿಯವರಿಗೆ ತಿಳಿಸಿ ವಾಪಸ್ ಕೊಡಿಸುತ್ತೇನೆ.

ಅಧ್ಯಕ್ಷರು :— ಇಲ್ಲಿಗೆ ಪ್ರಶ್ನೋತ್ತರಗಳು ಮುಕ್ತಾಯವಾಯಿತು.

(ಅ) ಚುಕ್ಕಿ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು)

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವರು) :— ಮಾನ್ಯ ಅಧ್ಯಕ್ಷರೆ, ಚುಕ್ಕಿ ಗುರುತಿಲ್ಲದ ಪ್ರಶ್ನೆಗಳ ಮೂರನೇ ಪಟ್ಟಿಯಲ್ಲಿರುವ ಸಮೂಹದಲ್ಲಿನ ಒಟ್ಟು 45 ಪ್ರಶ್ನೆಗಳಲ್ಲಿ 37 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯು ಮುಂದಿಡುತ್ತೇನೆ.

ಬಳ್ಳಾರಿ ನಗರದಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳ ನಿರ್ಮಾಣ.

66(308) ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬಳ್ಳಾರಿ ನಗರದ ಜನಸಂಖ್ಯೆಗೆ ಅನುಗುಣವಾಗಿ ಕುಡಿಯುವ ನೀರನ್ನು ಸರಬರಾಜು ಮಾಡಲು ಆರು ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಲು ಯೋಜನೆ ತಯಾರಿಸಲಾಗಿದೆಯೇ?

2. ಹಾಗಿದ್ದಲ್ಲಿ, ಇದಕ್ಕಾಗಿ ತಗಲುವ ಅಂದಾಜು ವೆಚ್ಚವೆಷ್ಟು?

3. ಈ ಯೋಜನೆಗೆ ಸರ್ಕಾರದ ಮಂಜೂರಾತಿ ನೀಡಿದೆಯೇ ಹಾಗಿದ್ದಲ್ಲಿ, ಇದನ್ನು ತ್ವರಿತವಾಗಿ ಕೈಗೊಳ್ಳಲಾಗುವುದೇ?